(36 ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದ ನೂತನ ಯೋಜನೆಯಾದ ರಾಜೀವ್ ಗಾಂಧಿ ಖೇಲ್ ಅಭಿಯಾನ್ (ಆರ್‌ಜಿಕೆಎ) ಅಡಿಯಲ್ಲಿ ಬ್ಲಾಕ್ ಮಟ್ಟದಲ್ಲಿ ಕೇಂದ್ರ ಸರ್ಕಾರದ ಅನುದಾನದಿಂದ ನಿರ್ಮಿಸಲು ಪ್ರಸ್ತಾವನೆಯು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದೆ).

ಇ) ಬೆಂಗಳೂರು ಉತ್ತರ ಭಾಗದಲ್ಲಿ ಹೊಸದಾಗಿ ಒಳಾಂಗಣ ಕ್ರೀಡಾಂಗಣ ನಿರ್ಮಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಕಂದಾಯ ಅಂಚೆ ಚೀಟಿ ಪುನರಾರಂಭ

910 (366); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ₹ 1 ಮೌಲ್ಯದ ರೆವಿನ್ಯೂ ಅಂಚೆ ಚೀಟಿಗಳ ಬಳಕೆಯನ್ನು ಯಾವಾಗ ರದ್ದುಗೊಳಿಸಲಾಗಿತ್ತು;

ಆ) ಇದಕ್ಕೆ ಕಾರಣಗಳೇನು;

ಇ) ಇದನ್ನು ಮತ್ತೆ ಪುನರಾರಂಭಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ;

ಈ) ಹಾಗಿದ್ದಲ್ಲಿ, ಕಾರಣಗಳೇನು;

ಉ) ಇದರಿಂದ ಸರ್ಕಾರಕ್ಕೆ ಬರಬಹುದಾದ ಅಂದಾಜು ಆದಾಯವೆಷ್ಟು;

ಊ) ಈ ಕಂದಾಯ ಅಂಚೆ ಚೀಟಿಗಳು ಕಾಳ ಸಂತೆಯಲ್ಲಿ ಹೆಚ್ಚಿನ ದರದಲ್ಲಿ ಮಾರಾಟವಾಗುವುದನ್ನು ತಪ್ಪಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ದಿನಾಂಕ 01.04.2003 ರಿಂದ ನಿಲ್ಲಿಸಲಾಗಿತ್ತು.

ಆ) ನಕಲಿ ಛಾಪಾ ಕಾಗದದ ಹಗರಣದ ಹಿನ್ನೆಲೆಯಲ್ಲಿ ರೆವಿನ್ಯೂ ಸ್ಟ್ಯಾಂಪ್ ಬಳಕೆಯನ್ನು ನಿಲ್ಲಿಸಲಾಗಿತ್ತು.

ಇ) ಹೌದು.

ಈ) ಸಾರ್ವಜನಿಕರಿಗೆ ತೊಂದರೆಯಾದ ಹಿನ್ನೆಲೆಯಲ್ಲಿ ದಿನಾಂಕ: 31.12.2014 ರಿಂದ ರೆವಿನ್ಯೂ ಸ್ಟ್ಯಾಂಪ್‌ಗಳನ್ನು ಪುನರ್‌ಬಳಸಲು ಆದೇಶಿಸಲಾಗಿದೆ.

ಉ) ಅಂದಾಜು ವಾರ್ಷಿಕ 10 ಕೋಟಿ ರೂ. ಗಳ ಆದಾಯವನ್ನು ನಿರೀಕ್ಷಿಸಲಾಗಿದೆ.

ಊ) ಸಾರ್ವಜನಿಕರಿಗೆ ಮುಕ್ತವಾಗಿ ರೆವಿನ್ಯೂ ಸ್ಟ್ಯಾಂಪ್‌ಗಳು ಲಭ್ಯವಾಗಲು ಹಿಂದಿನಂತೆ ಅಂಚೆ ಕಛೇರಿಗಳಲ್ಲಿ ಮರಾಟ ಮಾಡಲು ವ್ಯವಸ್ಥೆ ಮಾಡಲಾಗಿದೆ.

ಕಾರ್ಮಿಕರ ಕಲ್ಯಾಣ ಯೋಜನೆಗಳು

911 (367); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಬೆಂಗಳೂರಿನಲ್ಲಿ ಇಲ್ಲಿಯವರೆಗೆ ಎಷ್ಟು ಆಟೋರಿಕ್ಷಾ ಚಾಲಕರಿಗೆ ಯಾವ ಯಾವ ಕಾರ್ಮಿಕ ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸಲಾಗಿದೆ;

ಆ) ಈ ಯೋಜನೆಗಳ ಬಗ್ಗೆ ಆಟೋ ಚಾಲಕರಿಗೆ ಅರಿವು ಮೂಡಿಸಲು ಕೈಗೊಂಡ ಕ್ರಮಗಳೇನು;

ಇ) ಆಟೋ ಚಾಲಕರಿಗೆ ಕಡಿಮೆ ದರದಲ್ಲಿ ಅಕ್ಕಿ ಮತ್ತು ಗೋಧಿ ವಿತರಿಸುವ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆಯೇ?

ಈ) ಇಲ್ಲದಿದ್ದಲ್ಲಿ ಆಟೋ ಚಾಲಕರಿಗೆ ಕಡಿಮೆ ದರದಲ್ಲಿ ಪಡಿತರ ಸೌಲಭ್ಯ ಕಲ್ಪಿಸಲಾಗುವುದೇ?